# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 2209 |
| ಸದಸ್ಯರ ಹೆಸರು | : | ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 18.03.2022. |
| ಉತ್ತರಿಸುವವರು | : | ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು. |

| ಕ್ರಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಗ್ರಾಮ ಪಂಚಾಯಿತಿಗಳಲ್ಲಿ ಸೃಜಿಸಿರುವ ಕಾರ್ಯದರ್ಶಿ ಹಾಗೂ ಪಂಚಾಯ್ತಿ ಅಭಿವೃದ್ಧಿ ಅಧಿಕಾರಿಗಳ ಹುದ್ದೆಗಳ ಸಂಖ್ಯೆ ಎಷ್ಟು; | ಗ್ರಾಮ ಪಂಚಾಯಿತಿಗಳಲ್ಲಿ ಸೃಜನೆಯಾಗಿರುವ ಹುದ್ದೆಗಳು ಮತ್ತು ಖಾಲಿ ಇರುವ ಹುದ್ದೆಗಳ ವಿವರ ಈ ಕೆಳಕಂಡತ್ತಿದೆ. |
| (ಆ) | ಖಾಲಿ ಇರುವ ಕಾರ್ಯದರ್ಶಿ ಹಾಗೂ ಪಂಚಾಯ್ತಿ ಅಭಿವೃದ್ಧಿ ಅಧಿಕಾರಿಗಳ ಸಂಖ್ಯೆ ಎಷ್ಟು; | |

| ಕ್ರಸಂ | ವೃಂದ | ಸೃಜನೆ ಯಾದ ಹುದ್ದೆಗಳ ಸಂಖ್ಯೆ | ಖಾಲಿ ಇರುವ ಹುದ್ದೆಗಳ ಸಂಖ್ಯೆ |
|---|---|---|---|
| 1 | ಪಂಚಾಯತಿ ಅಭಿವೃದ್ಧಿ ಅಧಿಕಾರಿ | 6021 | 788 |
| 2 | ಗ್ರೇಡ್-1 ಗ್ರಾಮ ಪಂಚಾಯತಿ ಕಾರ್ಯದರ್ಶಿ | 2194 | 662 |
| 3 | ಗ್ರೇಡ್-2 ಗ್ರಾಮ ಪಂಚಾಯತಿ ಕಾರ್ಯದರ್ಶಿ | 3827 | 1016 |

| ಕ್ರಸಂ | ಪ್ರಶ್ನೆ | ಉತ್ತರ |
|---|---|---|
| (ಇ) | ಯಾವ ಕಾಲಮಿತಿಯಲ್ಲಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲಾಗುವುದು; | ಪಂಚಾಯತಿ ಅಭಿವೃದ್ಧಿ ಅಧಿಕಾರಿ ವೃಂದಕ್ಕೆ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ನೇಮಕಾತಿ ಪ್ರಾಧಿಕಾರ ಆಗಿದ್ದು ಗ್ರಾಮ ಪಂಚಾಯತಿ ಕಾರ್ಯದರ್ಶಿ ಗ್ರೇಡ್-1 ವೃಂದದ ಅರ್ಹ ನೌಕರರು ಲಭ್ಯವಾದಂತೆ ಜೇಷ್ಠತೆ ಮತ್ತು ಅರ್ಹತೆ ಆಧಾರದ ಮೇಲೆ ಮುಂಬಡ್ತಿ ಮೂಲಕ ಭರ್ತಿ ಮಾಡಲು ಮತ್ತು ಗ್ರಾಮ ಪಂಚಾಯಿತಿ ಕಾರ್ಯದರ್ಶಿ ಗ್ರೇಡ್-1 ಮತ್ತು ಗ್ರೇಡ್-2 ಹಾಗೂ ದ್ವಿತೀಯ ದರ್ಜೆ ಲೆಕ್ಕ ಸಹಾಯಕ ವೃಂದಕ್ಕೆ ಜಿಲ್ಲಾ ಪಂಚಾಯಿತಿಗಳ ಉಪ ಕಾರ್ಯದರ್ಶಿ (ಅಭಿವೃದ್ಧಿ) ರವರು ನೇಮಕಾತಿ ಪ್ರಾಧಿಕಾರ ಆಗಿದ್ದು, ಸದರಿ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರದಿಂದ ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ನಿರ್ದೇಶನ ನೀಡಲಾಗಿದೆ.<br><br>ಗ್ರಾಮ ಪಂಚಾಯತಿ ಕಾರ್ಯದರ್ಶಿ ಗ್ರೇಡ್-2 ವೃಂದದ ಹೈದರಾಬಾದ್ ಕರ್ನಾಟಕ ಪ್ರದೇಶವನ್ನು ಹೊರತುಪಡಿಸಿದ 263 ಹುದ್ದೆಗಳು ಮತ್ತು ಹೈದರಾಬಾದ್ ಕರ್ನಾಟಕ ಪ್ರದೇಶದ 80 ಹುದ್ದೆಗಳು |

| | | |
|---|---|---|
| | | ಸೇರಿದಂತೆ ಒಟ್ಟು 343 ಹುದ್ದೆಗಳಿಗೆ ನೇರ ನೇಮಕಾತಿ ಮಾಡಲು ಮತ್ತು ದ್ವಿತೀಯ ದರ್ಜೆ ಲೆಕ್ಕ ಸಹಾಯಕ ವೃಂದದ ಹೈದರಾಬಾದ್ ಕರ್ನಾಟಕ ಪ್ರದೇಶವನ್ನು ಹೊರತುಪಡಿಸಿದ 55 ಹುದ್ದೆಗಳು ಮತ್ತು ಹೈದರಾಬಾದ್ ಕರ್ನಾಟಕ ಪ್ರದೇಶದ 103 ಹುದ್ದೆಗಳು ಸೇರಿದಂತೆ ಒಟ್ಟು 158 ಹುದ್ದೆಗಳಿಗೆ ನೇರ ನೇಮಕಾತಿ ಮಾಡುವ ಪ್ರಸ್ತಾವನೆ ಪರಿಶೀಲನೆಯಲ್ಲಿದೆ. |
| (ಈ) | ಗ್ರಾಮ ಪಂಚಾಯ್ತಿಗಳಲ್ಲಿ ಗುತ್ತಿಗೆ/ಹೊರಗುತ್ತಿಗೆ ಆಧಾರದ ಮೇಲೆ ಎಷ್ಟು ಮಂದಿಯನ್ನು ನೇಮಕ ಮಾಡಿಕೊಳ್ಳಲಾಗಿದೆ;(ವರ್ಗವಾರು ವಿವರಗಳನ್ನು ನೀಡುವುದು) | ಗ್ರಾಮ ಪಂಚಾಯತಿಗಳಲ್ಲಿ ಗುತ್ತಿಗೆ / ಹೊರಗುತ್ತಿಗೆ ಆಧಾರದ ಮೇಲೆ ನೌಕರರನ್ನು ನೇಮಕ ಮಾಡಿಕೊಂಡಿರುವುದಿಲ್ಲ. |
| (ಉ) | ಇವರಿಗೆ ನೀಡಲಾಗುತ್ತಿರುವ ಮಾಸಿಕ ಗೌರವಧನವೆಷ್ಟು? (ವರ್ಗವಾರು ವಿವರಗಳನ್ನು ನೀಡುವುದು) | ಉದ್ಭವಿಸುವುದಿಲ್ಲ. |

ಸಂ. ಗ್ರಾಅಪ 124 ಗ್ರಾಪಂಅ 2022

(ಕೆ.ಎಸ್. ಈಶ್ವರಪ್ಪ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು.